# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೆಂಟನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಮಂಗಳವಾರ, ದಿನಾಂಕ:20ನೇ ಡಿಸೆಂಬರ್, 2022

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

### 02. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಶಾಸಕರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 04. ವರದಿಯನ್ನೊಪ್ಪಿಸುವುದು

**ಶ್ರೀ ಮಂಜುನಾಥ್ ಭಂಡಾರಿ ಅವರು (ಸದಸ್ಯರು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2021–22ನೇ ಸಾಲಿನ 06ನೇ ವರದಿಯನ್ನೊಪ್ಪಿಸುವುದು.

..2..

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ರಾಜ್ಯ ಸರ್ಕಾರ ಪ್ರತಿ ವರ್ಷ ವಿವಿಧ ಸಮಾಜಗಳ ಜಯಂತಿಗಳ ಆಚರಣೆಗೆ ಒದಗಿಸುತ್ತಿರುವ ಅನುದಾನದಲ್ಲಿ ತಾರತಮ್ಯವಾಗುತ್ತಿರುವ ಕುರಿತು ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

02. **ಶ್ರೀ ಗೋಂವಿದರಾಜು** ಅವರು ಕೋಲಾರ ಜಿಲ್ಲೆಯಲ್ಲಿ ಮಿನಿ ವಿಧಾನಸೌಧ ಇದ್ದರೂ ಕೂಡ ಉಪನೋಂದಣಾಧಿಕಾರಿ ಹಾಗೂ ಜಿಲ್ಲಾ ನೋಂದಣಾಧಿಕಾರಿಗಳ ಕಛೇರಿಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

03. **ಶ್ರೀ ದಿನೇಶ್ ಗೂಳಿಗೌಡ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಮಂಡ್ಯ ಜಿಲ್ಲೆಯಲ್ಲಿನ ಹಾಲು ಉತ್ಪಾದಕರಿಗೆ ನೀಡುತ್ತಿರುವ ಪ್ರೋತ್ಸಾಹ ಧನವನ್ನು ಆರು ತಿಂಗಳುಗಳಿಂದ ಬಿಡುಗಡೆಗೊಳಿಸದೆ ಇರುವ ಕುರಿತು ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

04. **ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್** ಅವರು ಉಡುಪಿ ಜಿಲ್ಲೆಯ ಕಾಪು ತಾಲ್ಲೂಕಿನ ಮಜೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಪಾದೂರು ಗ್ರಾಮದಲ್ಲಿ ಕಾರ್ಯನಿರ್ವಹಿಸುತ್ತಿರುವ ISPRL (Indian Strategic Petroleum Reserve Limited) ರವರು 2015ರಿಂದ ಗ್ರಾಮಪಂಚಾಯತಿಗೆ ಆಸ್ತಿ ಮತ್ತು ಕಟ್ಟಡ ತೆರಿಗೆ ಪಾವತಿಸದೆ ಬಾಕಿ ಉಳಿಸಿಕೊಂಡಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀ ಸಿ.ಎನ್. ಮಂಜೇಗೌಡ** ಅವರು ಮೈಸೂರಿನಲ್ಲಿರುವ ಪಾರಂಪರಿಕ ಕಟ್ಟಡಗಳ ನಿರ್ವಹಣೆಗೆ ಸರ್ಕಾರದ ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ಕಾಯ್ದಿರಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಪುಟ್ಟಣ್ಣ ಹಾಗೂ ಎಸ್.ವ್ಹಿ ಸಂಕನೂರ** ಅವರುಗಳು 01.04.2006ರ ನಂತರ ನೇಮಕಗೊಂಡಿರುವ ಸರ್ಕಾರಿ, ಅನುದಾನಿತ ಶಾಲಾ ಕಾಲೇಜುಗಳ ನೌಕರರಿಗೆ ನಿಶ್ಚಿತ ಪಿಂಚಣಿ ಸೌಲಭ್ಯ ಕಲ್ಪಿಸದೇ ಇರುವುದು ಹಾಗೂ ಜ್ಯೋತಿ ಸಂಜೀವಿನಿ ಸೌಲಭ್ಯ ವಿಸ್ತರಿಸದೇ ಇರುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**